ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳ ಸ್ಥಾಪಿಸುವ ಕುರಿತು

ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

763 (670) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ ; ರಾಜ್ಯ ಸರ್ಕಾರವು ಸಣ್ಣ ಕೈಗಾರಿಕೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿರುತ್ತದೆ ;

(ಆ) ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ಮೂಲಕ ಕಳೆದ ಮೂರು ವರ್ಷಗಳಲ್ಲಿ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ಸಣ್ಣ ಕೈಗಾರಿಕಾ ಇಲಾಖೆ ಸಣ್ಣ ಕೈಗಾರಿಕೆ ಅಭಿವೃದ್ಧಿ ಯಾವುದಾದರೂ ಯೋಜನೆಯನ್ನು ಕೈಗೊಂಡಿದೆಯೇ; ಇಲ್ಲದೇ ಹೋದಲ್ಲಿ ಯೋಜನೆಯನ್ನು ಕೈಗೊಳ್ಳುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಈಗಾಗಲೇ ಸ್ಥಾಪಿಸಲಾಗಿರುವ ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಸಹಾಯಧನ ನೀಡಲಾಗಿದೆಯೇ? (ವಿವರ ನೀಡುವುದು)